ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರಕಾಶ್ ಕೆ.ರಾಥೋಡ್ ರವರು ನಿಯಮ-330ರ ಅಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ.

---

ವಿಷಯ: ರಾಜ್ಯದ ನಗರ ಪ್ರದೇಶಗಳಲ್ಲಿರುವ ಶಾಲಾ-ಕಾಲೇಜುಗಳ ಬಳಿಯೇ ಮಾದಕ ವಸ್ತುಗಳಾದ ಗಾಂಜಾ-ಅಫೀಮು ಮಾರಲಾಗುತ್ತಿದ್ದು, ಅಪ್ರಾಪ್ತ ವಯಸ್ಸಿನವರು ದಾರಿ ತಪ್ಪಿ, ಡ್ರಗ್ಸ್ ಮತ್ತಿನಲ್ಲಿ ಅಪರಾಧ ಕೃತ್ಯ ಎಸಗಿ ತಮ್ಮ ಜೀವನವನ್ನೇ ಹಾಳುಮಾಡಿಕೊಂಡು, ಸಮಾಜಕ್ಕೆ ಕಂಟಕರಾಗುತ್ತಿದ್ದಾರೆ. ಅಲ್ಲದೇ, ನಗರ ಪ್ರದೇಶಗಳಲ್ಲಿ ಹುಕ್ಕಾಬಾರ್‌ಗಳ ಉಪಟಳವು ಹೆಚ್ಚಾಗುತ್ತಿದ್ದು, ವಿದ್ಯಾರ್ಥಿಗಳು, ಯುವಜನರು ಇದರ ದಾಸರಾಗುತ್ತಿದ್ದು, ದೇಶದ ಯುವಶಕ್ತಿಯು ಮಾದಕ ವ್ಯಸನಯುಕ್ತವಾಗುತ್ತಿದೆ. ಈ ರೀತಿಯಲ್ಲಿಯೇ ಮುಂದುವರೆದರೆ ಮುಂದೊಂದು ದಿನ ನಮ್ಮ ರಾಜ್ಯವು ದೇಶದಲ್ಲಿಯೇ ಮಾದಕ ದ್ರವ್ಯಗಳ ಅನುಭೋಗಿ ತವರೂರು ರಾಜ್ಯವಾಗುವುದರಲ್ಲಿ ಅನುಮಾನವಿಲ್ಲವಾಗಿದೆ. ಶಾಲಾ-ಕಾಲೇಜುಗಳ ಸಮೀಪವೆ ಈ ಹುಕ್ಕವನ್ನು ಉಪಯೋಗಿಸುವ ಪರಿಕರಗಳನ್ನು, ತೆರೆಮರೆಯಲ್ಲಿ ಮಾದಕ ದ್ರವ್ಯಗಳನ್ನು ಮಾರುವ ಅಂಗಡಿಗಳು ತೆರೆದಿರುವ ಕಾರಣ ವಿದ್ಯಾರ್ಥಿಗಳು ಸುಲಭವಾಗಿ ಈ ದಂಧೆಯಲ್ಲಿ ಸಿಲುಕಿ ಸಮಾಜದ ಸಾಮರಸ್ಯತೆ ಹಾಳುಮಾಡುತ್ತಿರುವ ವಿಚಾರವು ಸಾರ್ವಜನಿಕ ಮಹತ್ವದ ವಿಷಯವಾದ್ದರಿಂದ ದಿನಾಂಕ:16/09/2022 ರಂದು ನಿಯಮ 330ರ ಅಡಿಯಲ್ಲಿ ಸದನದಲ್ಲಿ ಪ್ರಸ್ತಾಪಿಸಲು ಅನುಮತಿಯನ್ನು ಕೋರುತ್ತೇನೆ.

ಉತ್ತರ:

ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಮಾದಕ ವಸ್ತುಗಳ ಸೇವನೆ, ಸರಬರಾಜು, ಮಾರಾಟ, ಸಾಗಾಣೆ ಮುಂತಾದ ಅಪರಾಧ ಕುರಿತಂತೆ ಆರೋಪಿಗಳ ವಿರುದ್ಧ ಎನ್.ಡಿ.ಪಿ.ಎಸ್. ಕಾಯ್ದೆ ಅಡಿಯಲ್ಲಿ ದಾಖಲಿಸಿರುವ ಹಾಗೂ ನಗರ ಪ್ರದೇಶಗಳಲ್ಲಿ ಅಕ್ರಮ ದಂಧೆಯಲ್ಲಿ ತೊಡಗಿರುವ ಹುಕ್ಕಾ ಬಾರ್‌ಗಳ ಮೇಲೆ ದಾಖಲಿಸಿರುವ ಪ್ರಕರಣಗಳ ಸಂಖ್ಯೆ ಈ ಕೆಳಕಂಡಂತಿದೆ.

**ಎನ್.ಡಿ.ಪಿ.ಎಸ್. ಕಾಯ್ದೆ ಅಡಿಯಲ್ಲಿ ದಾಖಲಿಸಿರುವ ಪ್ರಕರಣಗಳು.**

| ವರ್ಷ | ಎನ್.ಡಿ.ಪಿ.ಎಸ್. ಕಾಯ್ದೆ ಅಡಿಯಲ್ಲಿ ದಾಖಲಿಸಿರುವ ಪ್ರಕರಣಗಳ ಸಂಖ್ಯೆ. |
|---|---|
| 2020 | 4054 |
| 2021 | 5782 |
| 2022 (31ನೇ ಆಗಸ್ಟ್ ) | 4206 |

ನಗರ ಪ್ರದೇಶಗಳಲ್ಲಿ ಇರುವ ಹುಕ್ಕಾ ಬಾರ್‌ಗಳು ಮತ್ತು ಅವುಗಳ ಪೈಕಿ ನಿಯಮಗಳನ್ನು ಉಲ್ಲಂಘಿಸಿರುವ ಹುಕ್ಕಾ ಬಾರ್‌ಗಳ ವಿರುದ್ಧ ದಾಖಲಿಸಿರುವ ಪ್ರಕರಣಗಳ ವಿವರಗಳು.

| ವರ್ಷ | ಗುರುತಿಸಿರುವ ಹುಕ್ಕಾಬಾರ್‌ಗಳ ಸಂಖ್ಯೆ | ದಾಖಲಿಸಿರುವ ಪ್ರಕರಣಗಳ ಸಂಖ್ಯೆ |
|---|---|---|
| ಬೆಂಗಳೂರು ನಗರ | 78 | 54 |
| ಮೈಸೂರು ನಗರ | 16 | 1 |
| ಮಂಗಳೂರು ನಗರ | 4 | 1 |
| ಹುಬ್ಬಳ್ಳಿ-ಧಾರವಾಡ ನಗರ | - | - |
| ಬೆಳಗಾವಿ ನಗರ | - | - |
| ಕಲಬುರಗಿ ನಗರ | - | - |

**<u>ರಾಜ್ಯದಲ್ಲಿ ಮಾದಕ ವಸ್ತುಗಳ ಸೇವನೆಯನ್ನು ತಡೆಗಟ್ಟಲು, ನಿಯಂತ್ರಿಸಲು ಹಾಗೂ ಜನಜಾಗೃತಿ ಮೂಡಿಸಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.</u>**

1. ಮಾದಕ ದ್ರವ್ಯದ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಕಾಲೇಜುಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.
2. ಮಾದಕ ದ್ರವ್ಯಗಳ ಮಾರಾಟ ತಡೆಗಟ್ಟುವ ಬಗ್ಗೆ ಠಾಣಾ ಮಟ್ಟದಲ್ಲಿ ಗೌಪ್ಯ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ಅಕ್ಕ ಪಕ್ಕವಿರುವ ಅಂಗಡಿ ಮುಂಗಟ್ಟುಗಳಲ್ಲಿ ಮಾದಕ ದ್ರವ್ಯ ಮಾರಾಟವಾಗುತ್ತಿರುವ ಬಗ್ಗೆ ಗುಪ್ತವಾಗಿ ಮಾಹಿತಿಯನ್ನು ಕಲೆಹಾಕಿ ಕ್ರಮ ಕೈಗೊಳ್ಳಲಾಗುತ್ತಿದೆ.
3. ಮಾದಕ ದ್ರವ್ಯ (ಡ್ರಗ್ಸ್) ಹಾವಳಿಯನ್ನು ತಡೆಗಟ್ಟಲು ಸೂಕ್ತ ನಿಗಾವಹಿಸಿ ಮಾದಕ ದ್ರವ್ಯಗಳ ಮಾರಾಟ ಮತ್ತು ಸೇವಿಸುವವರ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದೆ ಹಾಗೂ ಇಂತಹ ಕಾನೂನು ಬಾಹಿರ ಚಟವಟಿಕೆಗಳು ಕಂಡುಬಂದಲ್ಲಿ ಸಾರ್ವಜನಿಕ ಟೋಲ್ ಫ್ರೀ ದೂರವಾಣಿ. ಸಂ.1908ಕ್ಕೆ ಸಂಪರ್ಕಿಸುವಂತೆ ಕೋರಲಾಗಿದೆ.
4. ಸಾಮಾಜಿಕ ಜಾಲತಾಣಗಳಲ್ಲಿ ಚುಟುಕು ವಿಡಿಯೋಗಳ ಮೂಲಕ ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.
5. ಈ ಹಿಂದೆ ಡ್ರಗ್ಸ್ ಅಪರಾಧಗಳಲ್ಲಿ ಭಾಗಿಯಾಗಿರುವ ರೂಢೀಕೃತ ಆಸಾಮಿಗಳ ಚಟುವಟಿಕೆಗಳ ಮೇಲೆ ತೀವ್ರ ನಿಗಾವಣೆಯಲ್ಲಿಡಲಾಗಿದೆ. ಜೊತೆಗೆ ಅಂತರಾಜ್ಯ ಡ್ರಗ್ಸ್ ಆರೋಪಿಗಳ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಅವರ ಮೇಲೆ ನಿಗಾ ಇಡಲಾಗಿದೆ.
6. ಬೆಂಗಳೂರು ನಗರ ಪೊಲೀಸರು ಪ್ರಥಮ ಬಾರಿಗೆ ಅಂತರ್ಜಾಲ (Dark Web) ಮುಖಾಂತರ ವಿದೇಶಗಳಿಂದ ಹಲವು ಮಾದರಿಯ ಡ್ರಗ್ಸ್‌ಗಳನ್ನು ಕೊರಿಯರ್ / ರಿಜಿಸ್ಟರ್ಡ್ ಅಂಚೆ ಮುಖಾಂತರ

ನಗರಕ್ಕೆ ತರಿಸುತ್ತಿದ್ದ ಡ್ರಗ್ಸ್‌ಜಾಲವನ್ನು ಪತ್ತೆ ಮಾಡಿ, ಅಪಾರ ಪ್ರಮಾಣದ ವಿವಿಧ ಡ್ರಗ್ಸ್‌ಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ.

7. ಈ ಜಾಲದಲ್ಲಿ ಭಾಗಿಯಾಗಿದ್ದ ಅಂಚೆ ಇಲಾಖೆ ನೌಕರರನ್ನು ದಸ್ತಗಿರಿ ಮಾಡಿ ಕಾನೂನು ಕ್ರಮಕ್ಕೊಳಪಡಿಸಲಾಗಿದೆ.
8. ವಿದೇಶಗಳಿಂದ ಪ್ರವಾಸಿ, ಶೈಕ್ಷಣಿಕ ವೀಸಾಗಳಲ್ಲಿ ಬರುವ ಕೆಲವು ವ್ಯಕ್ತಿಗಳು ಡ್ರಗ್ಸ್ ಮಾರಾಟದಲ್ಲಿ ತೊಡಗಿದ್ದ ವಿದೇಶಿ ಪ್ರಜೆಯನ್ನು PITNDPS-1988 ಕಾಯ್ದೆ ಅಡಿಯಲ್ಲಿ ಬಂಧನ ಆಜ್ಞೆಯನ್ನು ಹೊರಡಿಸಲಾಗಿದ್ದು, ಇದು ಕರ್ನಾಟಕ ರಾಜ್ಯದಲ್ಲಿ PITNDPS–1988 ಕಾಯ್ದೆ ಅಡಿಯಲ್ಲಿ ಬಂಧನ ಆದೇಶ ಜಾರಿಗೊಳಿಸಿದ ಪ್ರಥಮ ಪ್ರಕರಣವಾಗಿದ್ದು, ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದ ಸಲಹಾ ಮಂಡಳಿಯು ವಿದೇಶಿ ವ್ಯಕ್ತಿಯ ಬಂಧನದ ಆದೇಶವನ್ನು ಪುರಸ್ಕರಿಸಿರುತ್ತದೆ.
9. ಡ್ರಗ್ಸ್ ನಿಯಂತ್ರಣಕ್ಕೆ ಸಾರ್ವಜನಿಕ ಸಹಭಾಗಿತ್ವ ಪಡೆಯಲು ಸಾರ್ವಜನಿಕರ ಡ್ರಗ್ಸ್ ಅಕ್ರಮಗಳ ಬಗ್ಗೆ ರಹಸ್ಯ ಮಾಹಿತಿಗಳನ್ನು ನೀಡಲು ಶುಲ್ಕ ರಹಿತ ದೂರವಾಣಿ ಸಂಖ್ಯೆ 1908ಅನ್ನು ಪ್ರಾರಂಭಿಸಲಾಗಿದೆ. ಇದರಿಂದ ಸಾರ್ವಜನಿಕರು ಮುಕ್ತವಾಗಿ ಡ್ರಗ್ಸ್ ಸರಬರಾಜು, ಮಾರಾಟ, ಬಳಕೆಗಳ ಕುರಿತು ಪೊಲೀಸರಿಗೆ ಹೆಚ್ಚು ಹೆಚ್ಚು ಮಾಹಿತಿಗಳನ್ನು ನೀಡುವುದಕ್ಕೆ ಅವಕಾಶವಾಗಿರುತ್ತದೆ.
10. ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳು, ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಂಡು, ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಸೇವನೆ ವಿರುದ್ದ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.
11. ಠಾಣಾ ಸರಹದ್ದಿನ ಬೀಟ್ ಮತ್ತು ಸಬ್–ಬೀಟ್‌ಗಳಲ್ಲಿ ಆಗ್ಗಿಂದಾಗ್ಗೆ ಸಭೆಯನ್ನು ನಡೆಸಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.
12. ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಉಪನ್ಯಾಸದ ಮೂಲಕ ವಿವರವಾಗಿ ತಿಳುವಳಿಕೆ ನೀಡಲಾಗುತ್ತಿದೆ. ವಿದ್ಯಾರ್ಥಿಗಳು ಮತ್ತು ಯುವ ಸಮೂಹವು ಮಾದಕ ವಸ್ತುಗಳ ದುಶ್ಚಟಕ್ಕೆ ಬಲಿಯಾಗದಂತೆ ಶಾಲಾ ಕಾಲೇಜುಗಳ ಬಳಿ ಗಸ್ತು ವಾಹನಗಳಿಂದ ವಿಶೇಷವಾಗಿ ಗಸ್ತು ನಡೆಸಿ ಸ್ಥಳೀಯ ಪೊಲೀಸ್ ಅಧಿಕಾರಿ/ಸಿಬ್ಬಂದಿಗಳು ಆಯಾ ಶಾಖೆಗಳಿಗೆ ಹೋಗಿ ಮಾದಕ ವಸ್ತುಗಳ ದುಷ್ಪರಿಣಾಮದ ಬಗ್ಗೆ ಅರಿವು ಮೂಡಿಸಲಾಗುತ್ತಿದೆ ಹಾಗೂ ಮಾದಕ ವಸ್ತು ಸಾಗಣೆ ಹಾಗೂ ಮಾರಾಟ ಮಾಡುವವರ ವಿರುದ್ಧ ನಿಗಾ ವಹಿಸಲಾಗುತ್ತಿದೆ.
13. ಜನ ಸಾಮಾನ್ಯರಲ್ಲಿ ಮಾದಕ ವಸ್ತುಗಳ ವಿರುದ್ದ ಅರಿವು ಮೂಡಿಸುವ ಸಲುವಾಗಿ ಭಿತ್ತಿ ಪತ್ರಗಳನ್ನು, ಸಿನಿಮಾ ಮಂದಿರಗಳಲ್ಲಿ ಸ್ಲೈಡ್ ಶೋ, ಸುದ್ದಿ ಮಾಧ್ಯಮಗಳಲ್ಲಿ ಮಾದಕ ವಸ್ತುಗಳ ಬಳಕೆ ವಿರುದ್ದ ಸಂದೇಶಗಳನ್ನು ಪ್ರಕಟಿಸುವುದು, ಹೀಗೆ ಜನ ಸಾಮಾನ್ಯರಲ್ಲಿ ಅರಿವು ಮೂಡಿಸಲಾಗುತ್ತಿದೆ.
14. ವಿಶ್ವ ಸಂಸ್ಥೆಯ ನಿರ್ದೇಶನದನ್ವಯ ಪ್ರತಿ ವರ್ಷ ಆಗಸ್ಟ್ ಮತ್ತು ಸೆಪ್ಟೆಂಬರ್ ಮಾಹೆಯಲ್ಲಿ ಮಾದಕ ವಸ್ತುಗಳ ಮಾರಾಟ ಮತ್ತು ಸಾಗಣೆಯನ್ನು ತಡೆಗಟ್ಟಲು ರಾಜ್ಯಾದ್ಯಂತ ವಿಶೇಷ ಕಾರ್ಯಾಚರಣೆ ಕೈಗೊಳ್ಳಲಾಗುತ್ತಿದೆ. ಈ ಅವಧಿಯಲ್ಲಿ ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಮಾದಕ ವಸ್ತುಗಳ ಸೇವನೆಯಿಂದಾಗುವ ದೈಹಿಕ/ ಆರ್ಥಿಕ/ ಸಾಮಾಜಿಕ ದುಷ್ಪರಿಣಾಮಗಳ ಕುರಿತು ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

**ಹುಕ್ಕಾಬಾರ್‌ಗಳ ಮೇಲಿನ ಕ್ರಮಗಳು:**

- ಹುಕ್ಕಾಬಾರ್‌ಗಳಲ್ಲಿ ಯಾವುದೇ ಮಾದಕ ವಸ್ತುಗಳನ್ನು ಬಳಕೆ ಮಾಡಲು ಕಾನೂನಿನಲ್ಲಿ ಅವಕಾಶವಿರುವುದಿಲ್ಲ.

- ಹುಕ್ಕಾಬಾರ್‌ಗಳು ನಿಯಮ ಉಲ್ಲಂಘಿಸಿದಲ್ಲಿ ಅಂತಹ ಹುಕ್ಕಾ ಬಾರ್‌ಗಳ ಮೇಲೆ, KARNATAKA EXCISE ACT, 1965, THE DISASTER MANAGEMENT ACT, 2005, Cigarettes and other Tobacco Products Act (Amendment) Bill 2015 (COTPA), Prohibition of Advertisement and Regulation of Trade and Commerce, Production, Supply and Distribution) Rules – 2004, ಮತ್ತು IPC 1860 ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ.

- ಬಾರ್ ಮತ್ತು ರೆಸ್ಟೋರೆಂಟ್, ಪಬ್, ಡಾನ್ಸ್‌ಬಾರ್ ಮುಂತಾದ ಕಡೆ ಯುವಕರು ಹೆಚ್ಚಾಗಿ ಸೇರುವ ಸ್ಥಳಗಳು, ಶಾಲಾ ಕಾಲೇಜು ಆವರಣ, ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ, ಕಾನೂನು ಉಲ್ಲಂಘನೆಯಾಗದಂತೆ ನಿಗಾವಹಿಸಿ ಕ್ರಮವಹಿಸಲಾಗುತ್ತಿದೆ.

ಒಇ 25 ಪಿಎನ್‌ಡಿ 2022(ಇ)

(ಆರಗ ಜ್ಞಾನೇಂದ್ರ)
ಗೃಹ ಸಚಿವರು

330 -10 13/9